Akashvani : Bangalore
Regional Bulletin In Kannada
17.08.2024 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

17.08.2024 / 18.40 hrs

<><*<><>*><>

## ಮುಖ್ಯಾಂಶಗಳು

<><*<><>*><>

೧. ಮುಡಾ ಪ್ರಕರಣದಲ್ಲಿ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರಿಂದ ಅನುಮತಿ ; ರಾಜೀನಾಮೆ ನೀಡುವ ಪ್ರಶ್ನೆಯೇ ಇಲ್ಲ - ಮುಖ್ಯಮಂತ್ರಿ ಸಿದ್ದರಾಮಯ್ಯ

೨. ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ತಕ್ಷಣವೇ ರಾಜೀನಾಮೆ ನೀಡಬೇಕು ; ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

೩. ತುಂಗಾಭದ್ರಾ ಜಲಾಶಯದ ಗೇಟ್ ನಂ.೧೯ರ ಸ್ಟಾಪ್‌ಲಾಕ್ ಗೇಟ್ ಅಳವಡಿಕೆ ಕಾರ್ಯ ಯಶಸ್ವಿ

೪. ವೈದ್ಯ ವಿದ್ಯಾರ್ಥಿನಿ ಹತ್ಯೆ ಪ್ರಕರಣ ; ರಾಜ್ಯದಲ್ಲಿ ನಾಳೆ ಬೆಳಿಗ್ಗೆ ೬ಗಂಟೆಯವರೆಗೆ ಹೊರರೋಗಿಗಳ ವಿಭಾಗ ಸ್ಥಗಿತ

<><*<><>*><>

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ - ಮೂಡಾ ನಿವೇಶನ ಹಂಚಿಕೆ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪಾತ್ರ ಕುರಿತು ತನಿಖೆ ನಡೆಸಲು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಇಂದು ಪ್ರಾಸಿಕ್ಯೂಶನ್‌ಗೆ ಅನುಮತಿ ನೀಡಿದ್ದಾರೆ. ಟಿ.ಜೆ. ಅಬ್ರಹಾಂ, ಪ್ರದೀಪ್ ಹಾಗೂ ಸ್ನೇಹಮಯಿ ಕೃಷ್ಣ ಎಂಬುವರು ಸಲ್ಲಿಸಿದ್ದ ಮೂರು ಅರ್ಜಿಗಳನ್ನು ಆಧರಿಸಿ ರಾಜ್ಯಪಾಲರು ಪ್ರಾಸಿಕ್ಯೂಶನ್‌ಗೆ ಈ ಅನುಮತಿ ನೀಡಿದ್ದಾರೆ. ಇದಕ್ಕೂ ಮೊದಲು ರಾಜ್ಯಪಾಲ ಗೆಹ್ಲೋಟ್ ಅವರು, ಕಳೆದ ಜುಲೈ ೨೬ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಶೋಕಾಸ್ ನೋಟಿಸ್ ಜಾರಿ ಮಾಡಿ, ನಿಮ್ಮ ವಿರುದ್ಧ ಏಕೆ ಕಾನೂನು ಕ್ರಮ ಜರುಗಿಸಬಾರದು ಎಂಬುದಕ್ಕೆ ಏಳು ದಿನಗಳೊಳಗೆ ಉತ್ತರಿಸುವಂತೆ ಸೂಚಿಸಿದ್ದರು. ಇದಕ್ಕೆ ಪ್ರತಿಕ್ರಿಯಿಸಿದ್ದ ರಾಜ್ಯ ಸಚಿವ ಸಂಪುಟ, ರಾಜ್ಯಪಾಲರು, ಮುಖ್ಯಮಂತ್ರಿಗೆ ನೀಡಿದ್ದ ನೋಟಿಸ್ ಹಿಂಪಡೆಯುವಂತೆ ಶಿಫಾರಸ್ಸು ಮಾಡಿತ್ತು. ಸಾಂವಿಧಾನಿಕ ಪಾತ್ರವನ್ನು ದುರುಪಯೋಗ ಪಡಿಸಿಕೊಳ್ಳಲಾಗುತ್ತಿದೆ ಎಂದು ಆರೋಪಿಸಿ, ಮುಖ್ಯಮಂತ್ರಿಗೆ ನೀಡಿದ್ದ ನೋಟಿಸ್ ಹಿಂಪಡೆಯುವಂತೆ ಶಿಫಾರಸ್ಸು ಮಾಡಿತ್ತು.

<><*<><>*><>

ಮುಡಾ ಪ್ರಕರಣದಲ್ಲಿ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಖಂಡಿಸಿದ್ದಾರೆ. ರಾಜ್ಯಪಾಲರು ಸಂವಿಧಾನಬಾಹಿರ ಕೆಲಸ ಮಾಡಿದ್ದಾರೆ ಎಂದು ಹೇಳಿದ ಅವರು, ಕಾನೂನು ಹೋರಾಟ ಮಾಡುವುದಾಗಿ ಘೋಷಿಸಿದ್ದಾರೆ. ರಾಜ್ಯಪಾಲರು ಬಿಜೆಪಿ ಕೈಗೊಂಬೆಯಾಗಿದ್ದಾರೆ ಎಂದು ದೂರಿದ್ದಾರೆ. ತಮ್ಮ ವಿರುದ್ಧ ದೊಡ್ಡ ಷಡ್ಯಂತ್ರ ನಡೆದಿದ್ದು ಇದನ್ನು ನಿರೀಕ್ಷೆ ಮಾಡಿದ್ದೇ ಎಂದು ತಿಳಿಸಿದ್ದಾರೆ. ಕಾನೂನು ಹೋರಾಟ ನಡೆಸಲು ತೀರ್ಮಾನಿಸಿದ್ದು ಹೈಕಮಾಂಡ್, ಪಕ್ಷ, ಶಾಸಕರು ಎಲ್ಲರೂ ತಮ್ಮೊಂದಿಗಿದ್ದಾರೆ ಎಂದು ತಿಳಿಸಿದ ಅವರು ರಾಜೀನಾಮೆ ಕೊಡುವ ತಪ್ಪು ಮಾಡಿಲ್ಲ ಎಂದು ಸಮರ್ಥಿಸಿಕೊಂಡಿದ್ದಾರೆ.

<><*<><>*><>

ಮುಡಾ ಅಕ್ರಮ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಸಂಪುಟ ಸಹೋದ್ಯೋಗಿಗಳೊಂದಿಗೆ ತುರ್ತು ಸುದ್ದಿಗೋಷ್ಠಿ ನಡೆಸಿದ ಅವರು, ಮುಖ್ಯಮಂತ್ರಿ ವಿರುದ್ಧದ ಆರೋಪದಲ್ಲಿ ಯಾವುದೇ ಹುರುಳಿಲ್ಲ ಎಂದು ಸ್ಪಷ್ಟಪಡಿಸಿದರು. ರಾಜ್ಯಪಾಲರ ನಡೆ ವಿರೋಧಿಸಿ ರಾಜಕೀಯ ಹೋರಾಟ ಮತ್ತು ಕಾನೂನು ಸಮರಕ್ಕೆ ಸಿದ್ಧರಾಗಿದ್ದೇವೆ ಎಂದು ತಿಳಿಸಿದ್ದಾರೆ. ಇಡೀ ಸಂಪುಟ ಸಿದ್ದರಾಮಯ್ಯ ಅವರ ಬೆಂಬಲಕ್ಕೆ ನಿಂತಿದ್ದು, ಸರ್ಕಾರವನ್ನು ಉರುಳಿಸಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ರಾಜ್ಯಪಾಲರ ಕಚೇರಿಯನ್ನು ಬಿಜೆಪಿ ದುರ್ಬಳಕೆ ಮಾಡಿಕೊಂಡಿದೆ ಎಂದು ಅವರು ಆರೋಪಿಸಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲ ನಿರ್ಧಾರವು ಕೇಂದ್ರ ಸರ್ಕಾರದ ರಾಜಕೀಯ ಸೇಡಿನ ಕ್ರಮ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ, ಕರ್ನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅಭಿಪ್ರಾಯಪಟ್ಟಿದ್ದಾರೆ. ರಾಜ್ಯಪಾಲರು ಕೇಂದ್ರ ಸರ್ಕಾರದ ಕೈಗೊಂಬೆ ಎಂದು ಮಾಧ್ಯಮ ಹೇಳಿಕೆಯಲ್ಲಿ ಅವರು ಆರೋಪಿಸಿದ್ದಾರೆ. ಕರ್ನಾಟಕ ಮತ್ತು ದೇಶದ ಜನರಿಗಾಗಿ ನ್ಯಾಯಾಲಯದಲ್ಲಿ ಕಾನೂನಾತ್ಮಕವಾಗಿ ಹೋರಾಟ ನಡೆಸಲಿದ್ದು, ಸತ್ಯಕ್ಕೆ ಜಯ ಸಿಗಲಿದೆ ಎಂದು ತಿಳಿಸಿದ್ದಾರೆ.

<><*<><>*><>

ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತನಿಖೆಗೆ ಸಹಕರಿಸಬೇಕು ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ತಕ್ಷಣವೇ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದ್ದಾರೆ. ಯಾವುದೇ ಕಾರಣಕ್ಕೂ ಕಾಂಗ್ರೆಸ್ ಸರ್ಕಾರವನ್ನು ಬೀಳಿಸಿ ನಾವು ಅಧಿಕಾರಕ್ಕೆ ಬರುವ ಆಲೋಚನೆ ಬಿಜೆಪಿಗೆ ಇಲ್ಲ ಎಂದು ಸ್ಪಷ್ಟನೆ

ನೀಡಿದ್ದಾರೆ. ಕಾಂಗ್ರೆಸ್ ಸರ್ಕಾರ ೫ ವರ್ಷ ಸಂಪೂರ್ಣ ಆಡಳಿತ ನಡೆಸಲಿ ಎಂಬುದೇ ಬಿಜೆಪಿಯ ನಿಲುವು ಮತ್ತು ಆಶಯವಾಗಿದೆ ಎಂದು ಪ್ರತಿಕ್ರಿಯಿಸಿದ್ದಾರೆ. ಮುಖ್ಯಮಂತ್ರಿ ತಕ್ಷಣವೇ ರಾಜೀನಾಮೆ ನೀಡಬೇಕು ಎಂದು ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಆಗ್ರಹಿಸಿದ್ದಾರೆ. ಕೊಪ್ಪಳದಲ್ಲಿ ಮಾತನಾಡಿದ ಅವರು, ರಾಜ್ಯಪಾಲರ ನಿರ್ಧಾರವನ್ನು ಸ್ವಾಗತಿಸಲಾಗುವುದು ಎಂದು ತಿಳಿಸಿದ್ದಾರೆ. ಇದು ಬಿಜೆಪಿ ಪಾದಯಾತ್ರೆಗೆ ಸಿಕ್ಕ ಯಶಸ್ಸು ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಇದು ಯಾವುದೇ ವ್ಯಕ್ತಿಯ ವಿರುದ್ಧದ ಹೋರಾಟವಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ, ತನಿಖೆ ಎದುರಿಸಬೇಕು ಎಂದು ಬಿಜೆಪಿ ವಕ್ತಾರ ಸಂಬೀತ್ ಪಾತ್ರ ದೆಹಲಿಯಲ್ಲಿ ಆಗ್ರಹಿಸಿದ್ದಾರೆ.

<><*<><>*><>

ಕೊಪ್ಪಳ ರಾಯಚೂರು ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳ ಜೀವನಾಡಿಯಾಗಿದ್ದ ತುಂಗಭದ್ರಾ ಜಲಾಶಯದ ಗೇಟ್ ನಂಬರ್ ೧೯ ಗೆ ಸ್ಟಾಪ್ ಲಾಕ್ ಗೇಟ್ ಅಳವಡಿಕೆ ಕಾರ್ಯ ಸಂಪೂರ್ಣ ವಾಗಿದೆ. ಆಗಸ್ಟ್ ೧೭ರಂದು ಕೊಪ್ಪಳ ಜಿಲ್ಲೆಯ ಮುನಿರಾಬಾದ್ ನಲ್ಲಿರುವ ತುಂಗಭದ್ರಾ ಜಲಾಶಯದ ಎಲ್ಲಾ ಗೇಟ್‌ಗಳನ್ನು ಬಂದ್ ಮಾಡುವ ಮೂಲಕ ಜಲಾಶಯಕ್ಕೆ ಹರಿಸಲಾಗುತ್ತಿದ್ದ ನೀರನ್ನು ನಿಲ್ಲಿಸಲಾಗಿದೆ. ಹೀಗಾಗಿ ಜಲಾಶಯದಲ್ಲಿ ೭೦ ಟಿಎಂಸಿ ನೀರು ಸಂಗ್ರಹ  ಇದೆ ಕೊಪ್ಪಳ ಜಿಲ್ಲಾ ಆಡಳಿತ ರಾಜ್ಯ ಸರ್ಕಾರ ಹಾಗೂ ತಂತ್ರಜ್ಞರ ಪರಿಶ್ರಮ ಯಶಸ್ವಿಯಾಗಿದೆ. ಈ ಭಾಗದ ರೈತರಿಗೆ ಜೀವನಾಡಿ ಆಗಿರುವ ತುಂಗಭದ್ರಾ ಜಲಾಶಯದಿಂದ ಮುಂಗಾರು ಹಂಗಾಮಿಗೆ ಬೇಕಾಗುವಷ್ಟು ನೀರು ಸಂಗ್ರಹ ಜಲಾಶಯದಲ್ಲಿದೆ. ಗೇಟ್ ಅಳವಡಿಕೆಯ ಕಾರ್ಯ ಯಶಸ್ವಿಯಾಗಿರುವುದರಿಂದ ಕೊಪ್ಪಳ ರಾಯಚೂರು ಬಳ್ಳಾರಿ ಜಿಲ್ಲೆಗಳ ರೈತರು ನಿಟ್ಟುಸಿರು ಬಿಟ್ಟಿದ್ದಾರೆ ಎಂದು ನಮ್ಮ ಜಿಲ್ಲಾ ಪ್ರತಿನಿಧಿ ವರದಿಮಾಡಿದ್ದಾರೆ.

<><*<><>*><>

ವಿಜಯಪುರ ಜಿಲ್ಲೆಯ ನಿಡಗುಂದಿ ತಾಲೂಕಿನ ಆಲಮಟ್ಟಿ ಜಲಾಶಯ ಸಂಪೂರ್ಣ ತುಂಬಿದ್ದು, ೫೧೯.೬೦ ಮೀಟರ್ ಗರಿಷ್ಠ ಎತ್ತರದ ಡ್ಯಾಮ್‌ನಲ್ಲಿ ೧೨೩.೦೮೧ ಟಿಎಂಸಿ ನೀರು ಸಂಗ್ರಹ ಮಾಡಲಾಗಿದೆ. ಇದೇ ೨೧ನೇ ತಾರೀಖಿಗೆ ರಾಜ್ಯದ ಮುಖ್ಯ ಮಂತ್ರಿಗಳು ಹಾಗೂ ಉಪ ಮುಖ್ಯ ಮಂತ್ರಿಗಳು ಆಗಮಿಸಿ ತುಂಬಿದ ಕೃಷ್ಣೆಗೆ ಬಾಗೀನ ಅರ್ಪಿಸಲಿದ್ದಾರೆ ಎಂದು ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕ ಕೆ.ಪಿ. ಮೋಹನ್ ರಾಜ್ ತಿಳಿಸಿದ್ದಾರೆ.

<><*<><>*><>

ಕೊಲ್ಕತ್ತದಲ್ಲಿ ವೈದ್ಯಕೀಯ ವಿದ್ಯಾರ್ಥಿನಿ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿ ಹತ್ಯೆ ಮಾಡಿರುವ ಪ್ರಕರಣ ಖಂಡಿಸಿ ರಾಜ್ಯದಲ್ಲೂ ಭಾರತೀಯ ವೈದ್ಯಕೀಯ ಸಂಘ ನೇತೃತ್ವದಲ್ಲಿ ಇಂದು ಮುಷ್ಕರ ನಡೆಯಿತು. ದಕ್ಷಿಣಕನ್ನಡ ಜಿಲ್ಲೆಯಲ್ಲೂ ಖಾಸಗಿ ಆಸ್ಪತ್ರೆ ಹಾಗೂ ಕ್ಲಿನಿಕ್‌ಗಳ ವೈದ್ಯರು, ಸಿಬ್ಬಂದಿ ಹೊರ ರೋಗಿ ವಿಭಾಗ ಬಂದ್ ಮಾಡಿ

ಆಕ್ರೋಶ ವ್ಯಕ್ತಪಡಿಸಿದರು. ಕೊಡಗು ಜಿಲ್ಲೆಯಲ್ಲಿ ವೈದ್ಯರು, ವೈದ್ಯಕೀಯ ಸಿಬ್ಬಂದಿ ಆರೋಗ್ಯ ಸೇವೆ ಸ್ಥಗಿತಗೊಳಿಸಿ ಪ್ರತಿಭಟನೆ ನಡೆಸಿದರು. ಪ್ರತಿಭಟನಾ ಮೆರವಣಿಗೆ ನಡೆಸಿದ ವೈದ್ಯರು ಆರೋಪಿಗಳನ್ನು ಕೂಡಲೇ ಬಂಧಿಸುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದರು. ಕೊಲ್ಕತ್ತಾದಲ್ಲಿ ವೈದ್ಯೆ ಮೇಲಿನ ಲೈಂಗಿಕ ದೌರ್ಜನ್ಯ ಹಾಗೂ ಹತ್ಯೆ ಪ್ರಕರಣ ಖಂಡಿಸಿದ್ದು, ಕೋಲಾರದಲ್ಲೂ ವೈದ್ಯರು ಮುಷ್ಕರ ನಡೆಸಿದರು. ಆರೋಪಿಗಳನ್ನು ಬಂಧಿಸಲು ಒತ್ತಾಯಿಸಿ ಕೇಂದ್ರ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು. ಉತ್ತರಕನ್ನಡ ಜಿಲ್ಲೆಯಲ್ಲಿ ಭಾರತೀಯ ವೈದ್ಯಕೀಯ ಸಂಘ ಕರ್ನಾಟಕ ಶಾಖೆ ನೇತೃತ್ವದಲ್ಲಿ ವೈದ್ಯರು ಮುಷ್ಕರ ನಡೆಸಿದರು. ನಾಳೆ ಬೆಳಗ್ಗೆ ೬ ಗಂಟೆವರೆಗೆ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳ ಹೊರ ರೋಗಿಗಳ ವಿಭಾಗ ಬಂದ್ ಮಾಡಲಾಗಿದೆ.

<><*<><>*><>

ಭೂಕುಸಿತಗಳು ಮತ್ತು ಪ್ರವಾಹ ಸೇರಿದಂತೆ ತೀವ್ರ ಹವಾಮಾನ ಪರಿಸ್ಥಿತಿಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು, ಅನುಭವದ ಆಧಾರದ ಮೂಲಕ ತಯಾರಿಸಿದ ಕಾರ್ಯಸಾಧ್ಯ ಕ್ರಿಯಾ ಯೋಜನೆಗಳು ಪ್ರಕೃತಿ ವಿಕೋಪದಿಂದಾಗುವ ಘಟನೆಗಳನ್ನು ಸಮರ್ಥವಾಗಿ ಎದುರಿಸಲು ಸಾಧ್ಯವಾಗಲಿದೆ ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮೀ ಪ್ರಿಯಾ ತಿಳಿಸಿದ್ದಾರೆ.

<><*<><>*><>

ರಾಜ್ಯದ ಪ್ರವಾಸೋದ್ಯಮ ಅಭಿವೃದ್ಧಿಗೆ ಹಾಗೂ ರಾಜ್ಯದಲ್ಲಿ ಪ್ರವಾಸಿಗರನ್ನು ಆಕರ್ಷಿಸುವ ಸಲುವಾಗಿ ಪ್ರವಾಸೋದ್ಯಮ ಇಲಾಖೆಯು ದೇಶ ವಿದೇಶಗಳಲ್ಲಿ ಮೇಳಗಳನ್ನು ಆಯೋಜಿಸಿ ಮಾಹಿತಿ ನೀಡುತ್ತಿದೆ ಎಂದು ಇಲಾಖೆ ನಿರ್ದೇಶಕ ಡಾ. ಕೆ.ವಿ. ರಾಜೇಂದ್ರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರವಾಸೋದ್ಯಮ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಲು ಅನುವಾಗುವಂತೆ ಬ್ಯಾಂಕ್‌ಗಳಿಂದ ಸಿಗುವ ಆರ್ಥಿಕ ಸಹಾಯ ಮತ್ತು ಇತರೆ ಉತ್ತೇಜಕ ಅನುಕೂಲಗಳ ಬಗ್ಗೆ ಮಾಹಿತಿ ನೀಡಿದರು.

<><*<><>*><>

ಇನ್ನು ಹವಾವರ್ತಮಾನ,

ನೈಋತ್ಯ ಮುಂಗಾರು ಉತ್ತರಒಳನಾಡಿನಲ್ಲಿ ಪ್ರಬಲವಾಗಿದ್ದು, ದಕ್ಷಿಣ ಒಳನಾಡಿನಲ್ಲಿ ಸಕ್ರಿಯವಾಗಿದೆ. ಕರಾವಳಿಯಲ್ಲಿ ದುರ್ಬಲವಾಗಿದ್ದು, ರಾಜ್ಯದ ಹಲವೆಡೆ ಮಳೆಯಾಗಿದೆ. ಕುಷ್ಟಗಿಯಲ್ಲಿ ೧೫ ಸೆಂಟಿ ಮೀಟರ್, ಹುಣಸಗಿ, ಲಿಂಗಸುಗೂರು ತಲಾ ೧೦, ಕುಕನೂರು, ಕಕ್ಕೇರಿ, ಕೊಟ್ಟೂರು ೮ ಸೆಂಟಿ ಮೀಟರ್ ಮಳೆಯಾಗಿದೆ. ದಕ್ಷಿಣಕನ್ನಡ, ಉಡುಪಿ ಜಿಲ್ಲೆಗಳ ಹಲವೆಡೆ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಬಾಗಲಕೋಟೆ, ಚಿತ್ರದುರ್ಗ, ಚಿಕ್ಕಬಳ್ಳಾಪುರ, ತುಮಕೂರು ಜಿಲ್ಲೆಯಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಮುಂದಿನ ೨೪ ಗಂಟೆಯಲ್ಲಿ ಬೆಂಗಳೂರಿನ ಹಲವೆಡೆ ಗುಡುಗು ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ಚಿಕ್ಕಮಗಳೂರು ಜಿಲ್ಲೆಯ ಕೆಲವೆಡೆ ರೈತರ ಒತ್ತುವರಿ ಕೃಷಿ ಭೂಮಿಯನ್ನು ಅರಣ್ಯ ಇಲಾಖೆ ತೆರವು ಮಾಡುತ್ತಿದ್ದು ಇದನ್ನು ವಿರೋಧಿಸಿ ಶೃಂಗೇರಿ ವಿಧಾನ ಸಭಾ ಕ್ಷೇತ್ರದಲ್ಲಿ ಇಂದು ರೈತ ಸಂಘಟನೆಗಳು ಬಂದ್ ಗೆ ಕರೆ ನೀಡಿವೆ. ಶೃಂಗೇರಿ, ಕೊಪ್ಪ, ಎನ್ ಆರ್ ಪುರ ತಾಲೂಕುಗಳಲ್ಲಿ ಅಂಗಡಿ ಮುಂಗಟ್ಟುಗಳು, ಶಾಲೆ, ಕಾಲೇಜುಗಳನ್ನು ಬಂದ್ ಮಾಡಲಾಗಿದ್ದು ವಾಹನ ಸಂಚಾರ ಸ್ಥಗಿತಗೊಂಡಿತ್ತು.

೨. ಪಹಣಿಗೆ ಆಧಾರ ಜೋಡಣೆಯಲ್ಲಿ ಗದಗ ಜಿಲ್ಲೆಯ ಶಿರಹಟ್ಟಿ ತಾಲೂಕಿನ ತಹಶೀಲ್ದಾರ್ ಅನಿಲ ಬಡಿಗೇರ ಮತ್ತು ಲಕ್ಷ್ಮೇಶ್ವರ ತಾಲೂಕಿನ ತಹಶೀಲ್ದಾರ ವಾಸುದೇವ ಸ್ವಾಮಿ ಅವರು ಶೇಕಡ ೮೦.೧೯ ರಷ್ಟು ಪ್ರಗತಿ ಸಾಧಿಸಿದ್ದಾರೆ. ಒಟ್ಟು ೧೧ ಗ್ರಾಮ ಆಡಳಿತ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಪ್ರಶಂಸನಾ ಪತ್ರ ನೀಡಿ ಅಭಿನಂದಿಸಿದರು.

೩. ವಿಜಯನಗರ ಜಿಲ್ಲೆಯಲ್ಲಿ ಇ-ಕೆವೈಸಿ ಕಾರ್ಯ ಪ್ರಗತಿಯಲ್ಲಿದೆ. ಇನ್ನು ೪೭ ಸಾವಿರದ ೯೧೪ ಪಡಿತರ ಚೀಟಿಗಳ ಫಲಾನುಭವಿಗಳು ಇ-ಕೆವೈಸಿ ಮಾಡಿಸಲು ಬಾಕಿ ಉಳಿದಿದ್ದು, ಇ-ಕೆವೈಸಿ ಮಾಡಿಸದೇ ಬಾಕಿ ಇರುವ ಫಲಾನುಭವಿಗಳಿಗೆ ಇ-ಕೆವೈಸಿ ಮಾಡಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ಮಂಜುನಾಥ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>